ಇ) ಇಲ್ಲದಿದ್ದಲ್ಲಿ ಅರ್ಹ ಪತ್ರಕರ್ತರಿಗೆ ಮಾಸಾಶನ ಮಂಜೂರು ಮಾಡಲು ಸರ್ಕಾರ ಸಮಿತಿಯನ್ನು ರಚಿಸುವುದೇ?

ಶ್ರೀ ಕೆ. ಶಿವಮೂರ್ತಿ (ವಾರ್ತಾ ಮತ್ತು ಪ್ರವಾಸೋದ್ಯಮ ರಾಜ್ಯ ಸಚಿವರು):

ಅ) ಹೌದು.

ಆ) ಹೌದು.

ಇ) ಉದ್ಭವಿಸುವುದಿಲ್ಲ.

ನೆಲಮಂಗಲ ಟೌನ್‌ನಲ್ಲಿ ಕ್ರೀಡಾಂಗಣ ನಿರ್ಮಾಣ

1937 - ಶ್ರೀ ಅಂಜನಾ ಮೂರ್ತಿ (ನೆಲಮಂಗಲ) : ಮಾನ್ಯ ಯುವಜನ ಸೇವಾ ಮತ್ತು ಕ್ರೀಡಾ ಮತ್ತು ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ನೆಲಮಂಗಲ ಟೌನ್‌ನಲ್ಲಿ ಸ್ಥಳೀಯ ಶಾಸಕರಿಂದ ಖಾಲಿ ಇರುವ ಆಟದ ಮೈದಾನದಲ್ಲಿ ಒಂದು ಕ್ರೀಡಾಂಗಣ ಬೇಕೆಂದು ಸರ್ಕಾರಕ್ಕೆ ಒಂದು ಮನವಿ ಬಂದಿರುವುದು ನಿಜವೇ?

ಆ) ಹಾಗಿದ್ದಲ್ಲಿ ಸರ್ಕಾರವು ಕ್ರೀಡಾಪಟುಗಳ ಹಿತದೃಷ್ಟಿಯಿಂದ ಮನವಿಯನ್ನು ಪರಿಗಣಿಸುವುದೇ?

ಶ್ರೀ ಎಸ್. ರಮೇಶ್ (ಯುವಜನ ಸೇವಾ ಮತ್ತು ಕ್ರೀಡಾ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು):

ಅ) ಹೌದು.

ಆ) ಹೌದು, ಸರ್ಕಾರದ ಪರಿಶೀಲನೆಯಲ್ಲಿದೆ.

ಔರಾದ್ ತಾಲ್ಲೂಕಿನಲ್ಲಿ ಸ್ಟೇಡಿಯಂ ನಿರ್ಮಾಣ

1909-ಶ್ರೀ ಗುರುಪಾದಪ್ಪ ನಾಗಮಾರ್ಪಲ್ಲಿ (ಔರಾದ್) : ಮಾನ್ಯ ಯುವಜನಸೇವಾ ಮತ್ತು ಕ್ರೀಡಾ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೀದರ್ ಜಿಲ್ಲೆಯ ಔರಾದ್ ತಾಲ್ಲೂಕಿನಲ್ಲಿ ಸರ್ಕಾರದ ವತಿಯಿಂದ ಸ್ಟೇಡಿಯಂ ನಿರ್ಮಿಸಲಾಗಿದೆಯೆ?

ಆ) ಇಲ್ಲದಿದ್ದರೆ ಹಿಂದುಳಿದ ತಾಲ್ಲೂಕಾದ ಔರಾದ್‌ದಲ್ಲಿ ಕ್ರೀಡಾ ಚಟುವಟಿಕೆಗಳನ್ನು ಉತ್ತೇಜಿಸುವ ಸಲುವಾಗಿ ಸರ್ಕಾರದಿಂದ ಒಂದು ಸ್ಟೇಡಿಯಂ ನಿರ್ಮಿಸುವ ಬಗ್ಗೆ ಸರ್ಕಾರದ ಪರಿಶೀಲಿಸುತ್ತಿದೆಯೆ?

ಶ್ರೀ ಎಸ್. ರಮೇಶ್ (ಯುವಜನ ಸೇವಾ ಮತ್ತು ಕ್ರೀಡಾ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು) :

ಅ) ಇಲ್ಲ.

ಆ) ಹೌದು.

ಶೇರವಾಡ ಸವಣೂರು ರಸ್ತೆಯ ದುರಸ್ತಿ

1911-ಶ್ರೀ ಪಿ. ಸಿ. ಸಿದ್ದನಗೌಡರ್ (ಕಲಘಟಗಿ) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹಾಗಿದ್ದಲ್ಲಿ ಇದುವರೆವಿಗೂ ಅತ್ಯಂತ ದುಸ್ಥಿತಿಯಲ್ಲಿರುವ ಈ ರಸ್ತೆಯನ್ನು ಲೋಕೋಪಯೋಗಿ ಇಲಾಖೆಯವರು ದುರಸ್ತಿ ಮಾಡದಿರಲು ಕಾರಣವೇನು?

ಇ) ಆದ್ದರಿಂದ ವಾಹನ ಸಂಚಾರಕ್ಕೆ ತಡೆಯುಂಟಾಗಿ ಎಷ್ಟೋಸಲ ವಾಹನ ಸಂಚಾರವನ್ನು ಸ್ಥಗಿತಗೊಳಿಸಿರುವುದರಿಂದ ಸಾರ್ವಜನಿಕರಿಗೆ ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ?

ಈ) ಅದನ್ನು ಗಮನಿಸಿ ಸರ್ಕಾರವು ಈ ಕೂಡಲೇ ರಸ್ತೆಯನ್ನು ದುರಸ್ತಿ ಮಾಡಲು ಕ್ರಮ ಕೈಗೊಳ್ಳುವುದೇ?

ಶ್ರೀ ಹೆಚ್. ಆಶ್ವತ್ಥ ರೆಡ್ಡಿ (ಲೋಕೋಪಯೋಗಿ ಸಚಿವರು) :

ಅ) ಶೆರೆವಾಡ - ಸವಣೂರು ರಸ್ತೆಯು ಧಾರವಾಡ ಜಿಲ್ಲಾ ಪರಿಷತ್ತಿನ ವ್ಯಾಪ್ತಿಯಲ್ಲಿಯೇ ಇದೆ.

ಆ) ಈ ರಸ್ತೆಯ ಆತಿಕೆಟ್ಟುಹೋದ ಭಾಗಗಳ ದುರಸ್ತಿ ಕಾರ್ಯವನ್ನು ಜಿಲ್ಲಾಪರಿಷತ್ತಿನವರು ತೆಗೆದುಕೊಂಡಿದ್ದಾರೆ.

ಇ) ದಿನಾಂಕ: 12-8-91ರಿಂದ 16-8-91ರವರೆವಿಗೆ ಕೆ.ಎಸ್.ಆರ್.ಟಿ.ಸಿ. ಬಸ್ಸುಗಳ ಸಂಚಾರ ನಿಲ್ಲಿಸಲ್ಪಟ್ಟಿತ್ತೆಂದು ಸರ್ಕಾರದ ಗಮನಕ್ಕೆ ಬಂದಿದೆ.

ಈ) ಈ ರಸ್ತೆಯನ್ನು ದುರಸ್ಥಿ ಮಾಡಿ ಸುಸ್ಥಿತಿಯಲ್ಲಿಡಲು ಜಿಲ್ಲಾ ಪರಿಷತ್ತಿನವರಿಗೆ ಸೂಚಿಸಲಾಗಿದೆ, ಹಾಗೂ ಈ ರಸ್ತೆಯನ್ನು ಮೇಲ್ದರ್ಜೆಗೆ ಏರಿಸಿ ಲೋಕೋಪಯೋಗಿ ಇಲಾಖೆಗೆ ತೆಗೆದುಕೊಳ್ಳುವ ಬಗ್ಗೆ ಶೀಘ್ರವೇ ತೀರ್ಮಾನಿಸಲಾಗುತ್ತದೆ.

ಉತ್ತರ ಕನ್ನಡ ಜಿಲ್ಲೆಯಲ್ಲಿ ಹುಡ್ಕೋ ಮತ್ತು ಜನತಾಮನೆಗಳ ನಿರ್ಮಾಣದ ಬಗ್ಗೆ

1913 - ಶ್ರೀ ಆರ್. ವಿ. ದೇಶಪಾಂಡೆ (ಹಳಿಯಾಳ) : ಮಾನ್ಯ ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಉತ್ತರ ಕನ್ನಡ ಜಿಲ್ಲೆಗೆ 1988-89, 1989-90 ಮತ್ತು 1991-92ನೇ ಸಾಲಿನಲ್ಲಿ ಜನತಾ ಮತ್ತು ಹುಡ್ಕೋ ಯೋಜನೆಯಡಿಯಲ್ಲಿ ಎಷ್ಟೆಷ್ಟು ಮನೆಗಳನ್ನು ಮಂಜೂರು ಮಾಡಲಾಗಿದೆ (ವರ್ಷವಾರು ವಿವರಗಳನ್ನು ನೀಡುವುದು)?

ಆ) ಈ ಯೋಜನೆಗಳಿಗಾಗಿ 1988-89ರಿಂದ 1991-92ರವರೆವಿಗೆ ಎಷ್ಟು ಹಣವನ್ನು ಬಿಡುಗಡೆ ಮಾಡಲಾಗಿದೆ (ವರ್ಷವಾರು ವಿವರಗಳನ್ನು ನೀಡುವುದು)?

ಇ) ಈ ಹಣದಲ್ಲಿ ಸಾಲದ ರೂಪದಲ್ಲಿರುವ ಹಣವೆಷ್ಟು ಮತ್ತ ಸಹಾಯಧನದ ರೂಪದಲ್ಲಿರುವ ಹಣದ ಮೊತ್ತವೆಷ್ಟು?

ಈ) 1988-89 ರಿಂದ 1991-92 ರವರೆವಿಗೆ ಜಿಲ್ಲೆಯಲ್ಲಿ ಎಷ್ಟು ಜನತಾ ಮನೆಗಳು ಮತ್ತು ಹುಡ್ಕೋ ಮನೆಗಳನ್ನು ನಿರ್ಮಿಸಲಾಗಿದೆ (ತಾಲ್ಲೂಕುವಾರು ವಿವರಗಳನ್ನು ನೀಡುವುದು) ಮತ್ತು ಇದಕ್ಕಾಗಿ ವೆಚ್ಚವಾದ ಹಣವೆಷ್ಟು?

ಶ್ರೀ ಕೆ. ಹೆಚ್. ಪಾಟೀಲ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ಯ ಇಲಾಖೆ ಸಚಿವರು):

ಅ)	1988-89	1782	ಮನೆಗಳು
	1989-90	1540	ಮನೆಗಳು